ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ,

ಮುಳಬಾಗಿಲು

ಸಿ.ಸಿ. ಸಂಖ್ಯೆಃ 1474 /2025

ಸಿ.ಡಬ್ಲೂ:3 /ಪಿ.ಡಬ್ಲೂಃ 2

ಪ್ರಮಾಣೀಕರಿಸಿದ ದಿನಾಂಕಃ 13.07.2026

| | |
|---|---|
| ಹೆಸರು | ಶ್ರೀನಾಥ್ |
| ತಂದೆ/ಗಂಡನ ಹೆಸರು | ಶ್ರೀನಿವಾಸ್ |
| ವಯಸ್ಸು | 40 |
| ವೃತ್ತಿ | ಕೆ ಎಸ್ ಅರ್ ಟಿ ಸಿ ಚಾಲಕ |
| ವಾಸ | ಮನಿಘಟ್ಟಮಿಟ್ಟ |

ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ಚಾಸಾ 1 ಮತ್ತು 2 ರವರು ಗೊತ್ತಿಲ್ಲ. ನಿಪಿ 2 ರಲ್ಲಿರುವ ಸಹಿಯನ್ನು ನೋಡಿ ಗುರುತಿಸಿದ್ದು ಸಹಿಯನ್ನು ನಿಪಿ 2 (ಬಪಿ ) ಎಂದು ಗುರುತಿಸಲಾಯಿತು. ನಿಪಿ 2 ಕ್ಕೆ ಸುಮಾರು 2 ವರುಷಗಳ ಹಿಂದೆ ಠಾಣೆಯಲ್ಲಿ ಸಹಿ ಮಾಡಿದ್ದು ಯಾವ ವಿಚಾರಕ್ಕೆಂದು ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಜರುಗಿಸಿರುವುದಿಲ್ಲ.

(ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ. ಅವರ ಮನವಿಯನ್ನು ಪರಿಗಣಿಸಿ ಸಾಕ್ಷಿಯ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ದಿನಾಂಕ 7.05.2024 ರಂದು ಕೃತ್ಯ ನಡೆದ ಸ್ಥಳಕ್ಕೆ ಪೋಲಿಸರು ಬಂದು ಚಾಸಾ 1 ರವರು ತೋರಿಸಿದ ಸ್ಥಳದಲ್ಲಿ ನನ್ನ ಹಾಗೂ ಚಾಸಾ 1 ಮತ್ತು 2 ರವರ ಸಮಕ್ಷಮ ಬೆಳಗ್ಗೆ 9.00 ರಿಂದ 10.00 ವರೆಗೆ ನಿಪಿ 2 ರಂತೆ ಪಂಚನಾಮೆ ಜರುಗಿಸಿರುತ್ತಾರೆ ಹಾಗೂ ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ನಿಪಿ 2 ರಲ್ಲಿರುವ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ

ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ- ಇಲ್ಲಾ

ಮರುವಿಚಾರಣೆಃ- ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತಗೊಳಿಸಲಾಗಿದೆ).

ಓದಿ ಹೇಳಿ ಕೇಳಿ ಸರಿ ಇದೆ

(ಹರೀಶ್ ಜಿ )
ಪ್ರಧಾನ ಸಿವಿಲ್ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಮುಳಬಾಗಿಲು

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯದಲ್ಲಿ,

ಮುಳಬಾಗಿಲು

ಸಿ.ಸಿ. ಸಂಖ್ಯೆಃ 1474 /2025

ಸಿ.ಡಬ್ಲ್ಯೂ:1 /ಪಿ.ಡಬ್ಲ್ಯೂಃ 1

ಪ್ರಮಾಣೀಕರಿಸಿದ ದಿನಾಂಕಃ 13.07.2026

| | |
|---|---|
| ಹೆಸರು | ಸುರೇಶ್ ಬಾಬು |
| ತಂದೆ/ಗಂಡನ ಹೆಸರು | ರತ್ನಪ್ಪ |
| ವಯಸ್ಸು | 41 |
| ವೃತ್ತಿ | ಶಿಕ್ಷಕರು |
| ವಾಸ | ಮುಳಬಾಗಿಲು |

ಮುಖ್ಯ ವಿಚಾರಣೆಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ಚಾಸಾ 2 ಮತ್ತು 3 ರವರು ಗೊತ್ತಿಲ್ಲ. ನಮ್ಮ ಮನೆಯಲ್ಲಿ ಚಿನ್ನ ಮತ್ತು ಬೆಳ್ಳಿ ಅಭರಣಗಳು ನಾಪತ್ತೆಯಾಗಿರುವ ಬಗ್ಗೆ ಠಾಣೆಗೆ ದೂರು ನೀಡಿರುತ್ತೇನೆ. ದೂರನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 1 ಎಂದು ಸಹಿಯನ್ನು ನಿಪಿ 1 (ಎ) ಎಂದು ಗುರುತಿಸಲಾಯಿತು. ಪೋಲಿಸರು ನನ್ನ ಸಮಕ್ಷಮ ಯಾವುದೇ ಮಹಜರ್ ಜರುಗಿಸಿಲ್ಲ. ನಿಪಿ 1 ದೂರು ನೀಡಲು ಹೋದಾಗ ಮಹಜರಿಗೆ ನನಗೆ ಸಹಿ ಪಡೆದಿರುತ್ತಾರೆ. ದಿನಾಂಕ 7.05.2024 ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 2 ಎಂದು ಸಹಿಯನ್ನು ನಿಪಿ 2 (ಎ) ಎಂದು ಗುರುತಿಸಲಾಯಿತು. ನಾನು ಯಾವುದೇ ಮುಂದುವರೆದ ಹೇಳಿಕೆಯನ್ನು ನೀಡಿರುವುದಿಲ್ಲ. ಅರೋಪಿ ಗೊತ್ತಿರುವುದಿಲ್ಲ.

(ಮಾನ್ಯ ಸ.ಸ.ಅ. ರವರು ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ. ಅವರ ಮನವಿಯನ್ನು ಪರಿಗಣಿಸಿ ಸಾಕ್ಷಿಯ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ- ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ-

ದಿನಾಂಕ 5.05.2024 ರಂದು ಸಂಜೆ 6.30 ಗಂಟೆಗೆ ಮನೆಗೆ ಬೀಗ ಹಾಕಿಕೊಂಡು ತಿರುಪತಿಗೆ ಹೋಗಿದ್ದು ದಿನಾಂಕ 6.5.2024 ರಂದು ಸಂಜೆ 5.30 ಕ್ಕೆ ಚಾಸಾ 4 ರವರು ಫೋನ್ ಮಾಡಿ ಮನೆಯ ಬಾಗಿಲು ಮುರಿದಿರುವ ವಿಚಾರ ತಿಳಿಸಿದ್ದು ನಾನು ಸ್ಥಳಕ್ಕೆ ಹೋಗಿ ನೋಡಿದಾಗ ಒಟ್ಟು 209 ಗ್ರಾಂ 11 ಚಿನ್ನದ ಅಭರಣಗಳು ಹಾಗೂ ಒಂದು ಜೊತೆ 50 ಗ್ರಾಂ ನ ಬೆಳ್ಳಿ ಕಾಲು ಚೈನು ಮತ್ತು ನಗದು 40 ಸಾವಿರ ಕಳ್ಳತನ ವಾಗಿರುವ ಬಗ್ಗೆ ನಿಪಿ 1 ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ಅವು ನಾಪತ್ತೆಯಾಗಿರುತ್ತದೆ. ದಿನಾಂಕ 7.05.2024 ರಂದು ಕೃತ್ಯ ನಡೆದ ಸ್ಥಳಕ್ಕೆ ಪೋಲಿಸರು ಬಂದು ನಾನು ತೋರಿಸಿದ ಸ್ಥಳದಲ್ಲಿ ಚಾಸಾ 2 ಮತ್ತು 3 ರವರ ಸಮಕ್ಷಮ ಬೆಳಗ್ಗೆ 9.00 ರಿಂದ 10.00 ವರೆಗೆ ನಿಪಿ 2 ರಂತೆ ಪಂಚನಾಮೆ ಜರುಗಿಸಿರುತ್ತಾರೆ ಹಾಗೂ ಸ್ಥಳದಲ್ಲಿ ನನ್ನ ಸಹಿ ಪಡೆದಿರುತ್ತಾರೆ ಎಂದರೆ ಸರಿಯಲ್ಲ. ದಿನಾಂಕ 5.09.2024 ರಂದು ಹಾಗೂ ದಿನಾಂಕ 24.04.2025 ರಂದು ಈಗ ಓದಿ ಹೇಳಿದಂತೆ ತನಿಖಾಧಿಕಾರಿಗಳ ಮುಂದೆ 2 ಮುಂದುವರೆದ ಹೇಳಿಕೆಗಳನ್ನು

ನೀಡಿರುತ್ತೇನೆ ಎಂದರೆ ಸರಿಯಲ್ಲ. ನಿರಾಕರಿಸಿದ ಹೇಳಿಕೆಗಳನ್ನು ನಿಪಿ 3 ಮತ್ತು 4 ಎಂದು ಸಹಿಗಳನ್ನು ನಿಪಿ 3 (ಎ) ಮತ್ತು 4 (ಎ) ಎಂದು ಗುರುತಿಸಲಾಯಿತು. ನಿಪಿ 1 ರಿಂದ 4 ರಲ್ಲಿರುವ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ

ಪಾಟೀ ಸವಾಲುಃ- ಆರೋಪಿ ಪರ ವಕೀಲರಿಂದಃ- ಇಲ್ಲಾ

ಮರುವಿಚಾರಣೆಃ- ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತಗೊಳಿಸಲಾಗಿದೆ).

ಓದಿ ಹೇಳಿ ಕೇಳಿ ಸರಿ ಇದೆ

ಸಹಿ/-

(ಹರೀಶ್ ಜಿ )

ಪ್ರಧಾನ ಸಿವಿಲ್ ನ್ಯಾಯಾಧೀಶರು,

ಮತ್ತು ಜೆಎಂಎಫ್ ಸಿ, ಮುಳಬಾಗಿಲು